**ಶಿವಮೊಗ್ಗ ಕ್ಷೇತ್ರದ ವ್ಯಾಪ್ತಿಯ ಖಾದಿ ಮಂಡಳಿ ಕಾರ್ಯಕ್ರಮ**

2084 (2308) ಶ್ರೀ ಹೆಚ್.ಎಂ. ಚಂದ್ರಶೇಖರಪ್ಪ (ಶಿವಮೊಗ್ಗ): ಮಾನ್ಯ ಸಣ್ಣ ಕೈಗಾರಿಕೆ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ವತಿಯಿಂದ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಎಷ್ಟು ಘಟಕಗಳಿಗೆ, ಉದ್ದಿಮೆಗಳಿಗೆ ಸಾಲ ಸೌಲಭ್ಯ ಹಾಗೂ ಸಹಾಯಧನ ನೀಡಲಾಗಿರುತ್ತದೆ? (ವಿವರಗಳನ್ನು ನೀಡುವುದು)

ಶ್ರೀ ಆರ್. ರೋಷನ್‌ಬೇಗ್ (ಸಣ್ಣ ಕೈಗಾರಿಕೆ ಮತ್ತು ಹಜ್ ಸಚಿವರು):

ಅ) ಶಿವಮೊಗ್ಗ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ವತಿಯಿಂದ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಬ್ಯಾಂಕುಗಳ ಸಮೂಹ ಮೊತ್ತ ಯೋಜನೆ ಅಡಿಯಲ್ಲಿ ಅಥವಾ ಮಂಡಳಿಯಿಂದ ಅನುಮೋದಿತವಾದ ಅಂಚು ಹಣ ಯೋಜನೆಯಡಿಯಲ್ಲಿ ಬ್ಯಾಂಕುಗಳ ಮೂಲಕ ಯಾವುದೇ ವಿಧವಾದ ಸಾಲ ಅಥವಾ ಸಹಾಯಧನ ಮಂಜೂರು ಮಾಡಲಾಗಿರುವುದಿಲ್ಲ.

**ಶಿವಮೊಗ್ಗ ಜಿಲ್ಲೆಯಲ್ಲಿ ವಿಶೇಷ ಘಟಕ ಯೋಜನೆ ಅನುಷ್ಠಾನ**

2085 (2533) ಶ್ರೀ ಹೆಚ್.ಎಂ. ಚಂದ್ರಶೇಖರಪ್ಪ (ಶಿವಮೊಗ್ಗ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿಶೇಷ ಘಟಕ ಯೋಜನೆಯಡಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸರ್ಕಾರದ ವತಿಯಿಂದ ಬಿಡುಗಡೆಯಾದ ಅನುದಾನವೆಷ್ಟು;

ಆ) ಈ ಯೋಜನೆಯಡಿಯಲ್ಲಿ ವಿವಿಧ ರೀತಿಯ ತರಬೇತಿ ಕೋರ್ಸ್‌ಗಳ ಅನುಕೂಲವನ್ನು ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; ಈ ತರಬೇತಿಗೆ ವ್ಯಯಿಸಿದ ಅನುದಾನವೆಷ್ಟು;

ಇ) ಈ ಯೋಜನೆಯಡಿಯಲ್ಲಿ ತರಬೇತಿ ನೀಡಲು ಆಯ್ಕೆಗೊಂಡ ಸಂಸ್ಥೆಗಳೆಷ್ಟು; ಈ ಸಂಸ್ಥೆಗಳ ಆಯ್ಕೆ ಸರ್ಕಾರದ ನಿಯಮಾನುಸಾರ ನಡೆದಿದೆಯೇ?

ಈ) ಈ ಬಗ್ಗೆ ಜಿಲ್ಲಾ ಪಂಚಾಯತ್ ಒಪ್ಪಿಗೆಯನ್ನು ಪಡೆಯಲಾಗಿದೆಯೇ; (ವಿವರ ನೀಡುವುದು);

ಉ) ಶಿವಮೊಗ್ಗ ಜಿಲ್ಲೆಯ ವಿಶೇಷ ಘಟಕ ಯೋಜನೆಯ ಜಾರಿಯಲ್ಲಿ ಯಾವುದಾದರೂ ಭ್ರಷ್ಟಾಚಾರದ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ವಿಶೇಷ ಘಟಕ ಯೋಜನೆಯಡಿ ಕಳೆದ ಮೂರು ವರ್ಷಗಳಿಂದ ವಿವಿಧ ಇಲಾಖೆಗಳಿಗೆ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತೆ ನೀಡಲಾಗಿದೆ.

(ರೂ. ಲಕ್ಷಗಳಲ್ಲಿ)

| 1999-2000 | | 2000-01 | | 2001-02 | |
|---|---|---|---|---|---|
| ರಾಜ್ಯ | ಕೇಂದ್ರ | ರಾಜ್ಯ | ಕೇಂದ್ರ | ರಾಜ್ಯ | ಕೇಂದ್ರ |
| 97.00 | 90.00 | 116.00 | - | 80.00 | 133.21 |

ಶಿವಮೊಗ್ಗ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಗೆ 2000-01ನೇ ಸಾಲಿನಲ್ಲಿ ನೀಡಿದ ಅನುದಾನ ರೂ. 133.21 ಲಕ್ಷಗಳನ್ನು 2001-02ನೇ ಸಾಲಿನಲ್ಲಿ ಬಿಡುಗಡೆ ಮಾಡಲಾಗಿದೆ.